# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಾರನೆಯ ಅಧಿವೇಶನ**

**<u>ಕಾರ್ಯಕಲಾಪಗಳ ಪಟ್ಟಿ</u>**

**ಬುಧವಾರ, ದಿನಾಂಕ: 19ನೇ ಡಿಸೆಂಬರ್, 2018**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಉಪ ಸಭಾಪತಿ ಸ್ಥಾನಕ್ಕೆ ಚುನಾವಣೆ

01. **ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ ಅವರು ಶ್ರೀ ಎಸ್.ಎಲ್. ಧರ್ಮೇಗೌಡ** ಅವರನ್ನು ವಿಧಾನ ಪರಿಷತ್ತಿನ ಉಪ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ಪ್ರಸ್ತಾವನೆಯನ್ನು ಅನುಮೋದಿಸುವುದು.

02. **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಅವರು ಶ್ರೀ ಎಸ್.ಎಲ್. ಧರ್ಮೇಗೌಡ** ಅವರನ್ನು ವಿಧಾನ ಪರಿಷತ್ತಿನ ಉಪ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಎನ್. ಅಪ್ಪಾಜಿಗೌಡ** ಅವರು ಪ್ರಸ್ತಾವನೆಯನ್ನು ಅನುಮೋದಿಸುವುದು.

## 02. ಪ್ರಶ್ನೋತ್ತರ

| | | | |
|---|---|---|---|
| ಅ. | **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು** | : | **ಎಂಟನೆಯ ಪಟ್ಟಿ** |
| ಆ. | **<u>ತಡೆಹಿಡಿಯಲಾದ ಪ್ರಶ್ನೆ:</u>**<br>1) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ಎಸ್. ವೀಣಾ ಅಚ್ಚಯ್ಯ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 8(164) | : | **ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು** |
| | 2) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 12(232) | | **ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು** |
| ಇ. | **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು** | : | **ಎಂಟನೆಯ ಪಟ್ಟಿ** |

## O3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿ ಅವರು ;-**

ಕರ್ನಾಟಕ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸುವುದು.

**O1. ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕ, 2018**
**O2. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕ, 2018**

## O4. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1) ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕ, 2018**

**ಶ್ರೀ ಹೆಚ್.ಡಿ. ಕುಮಾರಸ್ವಾಮಿ** (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**2) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕ, 2018**

**ಶ್ರೀ ಸಿ. ಪುಟ್ಟರಂಗ ಶೆಟ್ಟಿ** (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018ನೇ ಸಾಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ೦೫. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಮರಿತಿಬ್ಬೇಗೌಡ** ಅವರು ಪ್ರಾಥಮಿಕ, ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ಕಾಲೇಜಿನ ಶಿಕ್ಷಕರು/ಉಪನ್ಯಾಸಕರನ್ನು ಕಳೆದ ಮೂರು ವರ್ಷಗಳಿಂದ ವರ್ಗಾವಣೆ ಮಾಡದಿರುವುದರಿಂದ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿಯುಂಟಾಗಿರುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಆ) ಶ್ರೀ ಎಂ. ನಾರಾಯಣಸ್ವಾಮಿ** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನೆಟ್ಟಿರುವ ಸಸಿಗಳು ಸಮರ್ಪಕವಾಗಿ ಬೆಳವಣಿಗೆಯಾಗದಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಇ) ಶ್ರೀ ಕೆ. ಗೋವಿಂದರಾಜ್** ಅವರು ಬೆಂಗಳೂರು ನಗರದ ಟಿ. ಸಿದ್ದಲಿಂಗಯ್ಯ ರಸ್ತೆಯಲ್ಲಿರುವ ಜೆ.ಡಬ್ಲ್ಯೂ. ಮಾರಿಯೊಟ್ ಬೃಹತ್ ಕಟ್ಟಡ ನಿರ್ಮಾಣದಲ್ಲಿ ನಿಯಮ ಉಲ್ಲಂಘನೆ ಮತ್ತು ಕಟ್ಟಡ ನಿರ್ಮಾಣ ಅವ್ಯವಹಾರ ಕುರಿತು **ಮಾನ್ಯ ಉಪ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಈ) ಶ್ರೀ ಅರುಣ ಶಹಾಪುರ** ಅವರು ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಈ ಪೂರ್ವದಲ್ಲಿದ್ದಂತೆ ಮುಖ್ಯೋಪಾಧ್ಯಾಯರ ಹುದ್ದೆಯನ್ನು ಅನುಮೋದಿಸುವುದು ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ/ತೆರವಾದ ಹುದ್ದೆಗಳನ್ನು ತುಂಬಲು ನಿರ್ಬಂಧಿಸಿರುವ ಎಸ್.ಎಸ್.ಎಲ್.ಸಿ. ಜಿಲ್ಲಾ ಸರಾಸರಿ ಫಲಿತಾಂಶವನ್ನು ರದ್ದುಪಡಿಸುವ ಕುರಿತು **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

## ೦೬. ನಿಯಮ ೩೩೦ರ ಮೇರೆಗೆ

**ಅ) ಶ್ರೀ ಎನ್. ರವಿಕುಮಾರ್** ಅವರು ರಾಜ್ಯ ಸರ್ಕಾರಿ ಶಾಲೆಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ವಿದ್ಯಾರ್ಥಿಗಳಿಗೆ ''ವಿದ್ಯಾವಿಕಾಸ ಯೋಜನೆ''ಯಡಿ ಸಮವಸ್ತ್ರ ವಿತರಣೆಯಲ್ಲಿ ಆಗಿರುವ ಅವ್ಯವಹಾರದ ಬಗ್ಗೆ ಪ್ರಸ್ತಾಪಿಸುವುದು.

**ಆ) ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು)** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದಲ್ಲಿನ ಖಾನಾಪುರ ತಾಲ್ಲೂಕಿನ ನೇರಸೆ, ಶಿರೋಳಿ ಹಾಗೂ ಇತರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸದಿರುವ ಬಗ್ಗೆ ಪ್ರಸ್ತಾಪಿಸುವುದು.

**ಇ) ಶ್ರೀಯುತರುಗಳಾದ: ಪಿ.ಆರ್.ರಮೇಶ್, ಹೆಚ್.ಎಂ. ರೇವಣ್ಣ ಹಾಗೂ ಎಂ.ಸಿ. ವೇಣುಗೋಪಾಲ್** ಅವರುಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಸವಿತಾ ಸಮಾಜ, ತಿಗಳ, ಮಡಿವಾಳ ಹಾಗೂ ಕುಂಬಾರ ಈ ಸಮುದಾಯಗಳ ಆರ್ಥಿಕ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ವಿನಿಯೋಗಿಸಿರುವ ಬಗ್ಗೆ ಪ್ರಸ್ತಾಪಿಸುವುದು.

..4

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:**<br>**ಕೋಟ ಶ್ರೀನಿವಾಸ ಪೂಜಾರಿ,**<br>**ಮಾನ್ಯ ವಿರೋಧ ಪಕ್ಷದ ನಾಯಕರು**<br>**ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ,**<br>**ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು**<br>**ಹಾಗೂ ಮಾನ್ಯ ಸದಸ್ಯರುಗಳಾದ:**<br>**ಆಯನೂರು ಮಂಜುನಾಥ**<br>**ರಘುನಾಥ್‌ರಾವ್ ಮಲ್ಕಾಪೂರೆ**<br>**ಡಾ: ತೇಜಸ್ವಿನಿಗೌಡ ಹಾಗೂ**<br>**ಎನ್. ರವಿಕುಮಾರ್** | **ರಾಜ್ಯದಲ್ಲಿ ಭೀಕರ ಬರಗಾಲ ಮತ್ತು ಈ ಸಂಬಂಧ ರೈತರು ಆತ್ಮಹತ್ಯೆಗೆ ಒಳಗಾಗುತ್ತಿರುವ ಬಗ್ಗೆ.** |

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ) ಕೃಷ್ಣಾ ಕೊಳ್ಳದಲ್ಲಿ ‘‘ಬಿ’’ ಸ್ಕೀಂ ಅಡಿಯಲ್ಲಿ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರು ಆಂಧ್ರ ಪ್ರದೇಶದ ಪಾಲಾಗುತ್ತಿರುವ ಬಗ್ಗೆ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಕುರಿತು ದಿನಾಂಕ: 11.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆಗಳಾದ: 24(244) ಮತ್ತು 23(280)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯಗಳ ಬಗ್ಗೆ **ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಹಾಗೂ ಮಾನ್ಯ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ಆ) ಏಕರೂಪದಲ್ಲಿ ಪೊಲೀಸರ ನೇಮಕಾತಿ ಬಗ್ಗೆ ಹಾಗೂ ಔರಾದ್ಕರ್ ವರದಿ ಜಾರಿಯಾಗುವ ಕುರಿತು ದಿನಾಂಕ: 14.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆಗಳಾದ: 61(667) ಮತ್ತು 65(19)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯಗಳ ಬಗ್ಗೆ **ಮಾನ್ಯ ಸದಸ್ಯರುಗಳಾದ: ಶ್ರೀ ಆರ್. ಧರ್ಮಸೇನ ಮತ್ತು ಶ್ರೀ ಎಂ.ಕೆ. ಪ್ರಾಣೇಶ್** ಅವರುಗಳಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ಇ) ಗಂಗಾ ಕಲ್ಯಾಣ ಯೋಜನೆ ಅವ್ಯವಹಾರದ ಕುರಿತು ದಿನಾಂಕ: 17.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 88(44)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಬಗ್ಗೆ **ಶ್ರೀ ಎಂ.ಕೆ. ಪ್ರಾಣೇಶ್** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ (ಪ್ರ)**

---